ಶ್ರೀ ಎ. ನಾರಾಯಣಸ್ವಾಮಿ (ಸಮಾಜ ಕಲ್ಯಾಣ ಮತ್ತು ಬಂಧೀಖಾನೆ ಸಚಿವರು) :

ಅ) ಹೌದು.

ಆ) ಸದರಿ ವರದಿಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸ ಲಾಗುತ್ತಿದೆ.

ರಾಜ್ಯದಲ್ಲಿನ ಅಕ್ರಮ ಕೃಷಿ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವುದು

740 (60) ಶ್ರೀ ರಾಮಲಿಂಗಾ ರೆಡ್ಡಿ (ಬಿಟಿಎಂ ಲೇಔಟ್) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿರುವ ಕೃಷಿ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು;

ಆ) ಇವುಗಳ ಪೈಕಿ, ಎಷ್ಟು ನೀರಾವರಿ ಪಂಪ್‌ಸೆಟ್‌ಗಳನ್ನು ಅಕ್ರಮವಾಗಿ ಅಳವಡಿಸಿಕೊಳ್ಳಲಾಗಿದೆ;

ಇ) ಇಲ್ಲಿಯವರೆಗೆ ಎಷ್ಟು ಅಕ್ರಮ ಕೃಷಿ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ;

ಈ) ರೈತರು ದಂಡ ಶುಲ್ಕವನ್ನು ಪಾವತಿಸಬೇಕಾಗಿರುವುದರಿಂದ ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲು ಮುಂದೆ ಬರುತ್ತಿಲ್ಲ ಎಂಬುದು ನಿಜವಲ್ಲವೇ;

ಉ) ಹಾಗಿದ್ದಲ್ಲಿ, ದಂಡವಿಲ್ಲದೆ ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲು ಸರ್ಕಾರ ನಿರ್ಧರಿಸಿದೆಯೇ?

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) 30–6–2012ರ ಅಂತ್ಯದಲ್ಲಿದ್ದಂತೆ ರಾಜ್ಯದಲ್ಲಿ ಒಟ್ಟು **19,56,510** ನೀರಾವರಿ ಪಂಪುಸೆಟ್ಟುಗಳಿರುತ್ತವೆ.

ಆ) ವಿದ್ಯುತ್ ಸರಬರಾಜು ಕಂಪನಿಗಳು ಅಂದಾಜಿಸಿರುವಂತೆ ಒಟ್ಟು **2,29,010** ಅನಧಿಕೃತ ನೀರಾವರಿ ಪಂಪುಸೆಟ್ಟುಗಳಿವೆಯೆಂದು ಅಂದಾಜಿ ಸಲಾಗಿದೆ.

ಇ) ಅನಧಿಕೃತ ನೀರಾವರಿ ಪಂಪುಸೆಟ್ಟುಗಳನ್ನು ಸಕ್ರಮಗೊಳಿಸಲು 30–6–2012ರ ಅಂತ್ಯಕ್ಕೆ ಒಟ್ಟು **2,16,465** ಅರ್ಜಿಗಳು ನೋಂದಾಯಿತ ಗೊಂಡಿದ್ದು, ಇವುಗಳ ಪೈಕಿ **98,670** ಅನಧಿಕೃತ ನೀರಾವರಿ ಪಂಪುಸೆಟ್ಟು ಗಳನ್ನು ಸಕ್ರಮಗೊಳಿಸಲಾಗಿದೆ.

ಈ) ಮತ್ತು ಉ)

ಸಕ್ರಮೀಕರಣ ಯೋಜನೆಯನ್ವಯ ಫಲಾನುಭವಿಗಳು ಮಾಪಕ ಭದ್ರತಾ ಠೇವಣಿಯನ್ನು ಹೊರತುಪಡಿಸಿ ಪ್ರತಿ ಅನಧಿಕೃತ ನೀರಾವರಿ ಪಂಪುಸೆಟ್‌ಗೆ ರೂ.10,000/– ಜೊತೆಗೆ 2 ತಿಂಗಳ ಕನಿಷ್ಠ ಠೇವಣಿ (2 ಎಂ.ಎಂ.ಡಿ) ಯನ್ನು ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಪಡೆದು ಸಕ್ರಮಗೊಳಿಸಲಾಗುತ್ತದೆ.

ಅನಧಿಕೃತ ನೀರಾವರಿ ಪಂಪುಸೆಟ್ಟುಗಳಿಗೆ ಮೂಲಭೂತ ಸೌಕರ್ಯ ಗಳನ್ನು ಕಲ್ಪಿಸಿ ಸಕ್ರಮಗೊಳಿಸಲು ಪ್ರತಿ ಪಂಪುಸೆಟ್ಟಿಗೆ ರೂ.1.25 ಲಕ್ಷ ವೆಚ್ಚವಾಗುವುದೆಂದು ಅಂದಾಜಿಸಲಾಗಿದ್ದು, ಈ ಸಂಬಂಧ ತಗಲುವ ವೆಚ್ಚದಲ್ಲಿ ಪ್ರತಿ ನೀರಾವರಿ ಪಂಪ್‌ಸೆಟ್‌ಗೆ ರೂ.25,000/– ಗಳನ್ನು ರಾಜ್ಯ ಸರ್ಕಾರ ದಿಂದ ಭರಿಸಲಾಗುತ್ತಿದ್ದು, ಬಾಕಿ ಮೊತ್ತವನ್ನು ವಿದ್ಯುತ್ ಸರಬರಾಜು ಕಂಪನಿಗಳು ಭರಿಸುತ್ತಿವೆ.

ಚಳ್ಳಕೆರೆ ತುರುವನೂರಿಗೆ ನಿರಂತರ ವಿದ್ಯುತ್ ಪೂರೈಕೆ

758 (20) ಶ್ರೀ ತಿಪ್ಪೇಸ್ವಾಮಿ (ಚಳ್ಳಕೆರೆ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿನ ತುರುವನೂರಿಗೆ ನಿರಂತರ ವಿದ್ಯುತ್ ಸೌಲಭ್ಯ ಕಲ್ಪಿಸಲು ಸಲ್ಲಿಸಿದ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಆ) ಯಾವಾಗಿನಿಂದ ನಿರಂತರ ವಿದ್ಯುತ್ ಸೌಲಭ್ಯ ಕಲ್ಪಿಸಲಾ ಗುವುದು?

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿನ ತುರುವನೂರಿಗೆ ನಿರಂತರ ಜ್ಯೋತಿ ಯೋಜನೆಯಡಿಯಲ್ಲಿ ವಿದ್ಯುತ್ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ